# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಕೆ.ಎ ತಿಪ್ಪೇಸ್ವಾಮಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2387 |
| ಉತ್ತರಿಸಬೇಕಾದ ದಿನಾಂಕ | : | 22-03-2022 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವ್ಯವಸ್ಥಾಪಕ ನಿರ್ದೇಶಕರು / ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳನ್ನು ದಾವಣಗೆರೆ ಡಿ.ಸಿ.ಸಿ ಬ್ಯಾಂಕ್ ಹಾಗೂ ರಾಜ್ಯದ ಅನೇಕ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಿಗೆ ಸರ್ಕಾರದ ಸಹಕಾರ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸದಿರಲು ಕಾರಣವೇನು: | ಕರ್ನಾಟಕ ರಾಜ್ಯದಲ್ಲಿ 21 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿದ್ದು, ಈ ಪೈಕಿ ಈ ಕೆಳಕಂಡ 11 ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ಸಹಕಾರ ಇಲಾಖಾಧಿಕಾರಿ/ಲೆಕ್ಕಪರಿಶೋಧನಾ ಇಲಾಖೆಯ ಅಧಿಕಾರಿಗಳನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.<br>1. ರಾಯಚೂರು-ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>2. ಕಲಬುರಗಿ-ಯಾದಗಿರಿ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>3. ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>4. ಕೆಡಿಸಿಸಿ ಬ್ಯಾಂಕ್, ಧಾರವಾಡ<br>5. ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>6. ಚಿತ್ರದುರ್ಗ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>7. ಹಾಸನ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>8. ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>9. ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>10. ಮೈಸೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>11. ಕೊಡಗು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>• ಬಳ್ಳಾರಿ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕಿಗೆ ಸಹಕಾರ ಇಲಾಖೆಯ ನಿವೃತ್ತ ಅಪರ ನಿಬಂಧಕರನ್ನು ಮುಖ್ಯಕಾರ್ಯನಿರ್ವಹಣಾಧಿಕಾರಿಯಾಗಿ ನೇಮಕ ಮಾಡಿಕೊಳ್ಳಲಾಗಿದೆ.<br>ಈ ಕೆಳಕಂಡ 08 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಬ್ಯಾಂಕಿನ ಆಡಳಿತ ಮಂಡಳಿ ನಿರ್ಣಯಿಸಿ ಬ್ಯಾಂಕಿನ ಅಧಿಕಾರಿಗಳನ್ನೇ ಮುಖ್ಯಕಾರ್ಯನಿರ್ವಹಣಾಧಿಕಾರಿಗಳನ್ನಾಗಿ ನೇಮಕ ಮಾಡಿಕೊಂಡಿರುತ್ತಾರೆ. |

| | | |
|---|---|---|
| | | 1. ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>2. ಕೆನರಾ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>3. ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>4. ಶಿವಮೊಗ್ಗ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>5. ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>6. ಬೀದರ್ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>7. ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>8. ತುಮಕೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br><br>ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ ಇಲ್ಲಿ ನಿವೃತ್ತ ವಾಣಿಜ್ಯ ಬ್ಯಾಂಕಿನ ಅಧಿಕಾರಿಯನ್ನು ಮುಖ್ಯಕಾರ್ಯನಿರ್ವಹಣಾಧಿಕಾರಿಯನ್ನಾಗಿ ಬ್ಯಾಂಕಿನ ಆಡಳಿತ ಮಂಡಳಿ ನೇಮಿಸಿಕೊಂಡಿದೆ. |
| (ಆ) | ರಾಜ್ಯದ ಅನೇಕ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳನ್ನು ತನ್ನ ನೌಕರರನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಹುದ್ದೆಗೆ ಕಾನೂನು ಬಾಹಿರವಾಗಿ ನಿಯೋಜಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು: | ರಾಜ್ಯದ 09 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಆರ್.ಬಿ.ಐ/ನಬಾರ್ಡ್‌ನ Fit and proper criteria ಮಾನದಂಡಗಳಿಗೆ ಅನುಗುಣವಾಗಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳನ್ನು ನೇಮಿಸಿಕೊಳ್ಳಬೇಕೆಂಬ ನಿಯಮವಿದ್ದು, **ಅನುಬಂಧ–1** ರಲ್ಲಿ ನೀಡಲಾಗಿದೆ.<br><br>ಈ ಕೆಳಕಂಡ ಎರಡು ಬ್ಯಾಂಕುಗಳು ಈ ನಿಯಮವನ್ನು ಪಾಲಿಸದೆ ಮುಖ್ಯಕಾರ್ಯನಿರ್ವಹಣಾಧಿಕಾರಿಗಳನ್ನು ನೇಮಿಸಿಕೊಂಡಿರುತ್ತಾರೆ.<br><br>ಸರ್ಕಾರದ ಪೂರ್ವಾನುಮತಿ ಇಲ್ಲದೆ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ., ಇಲ್ಲಿ ನಿವೃತ್ತ ವಾಣಿಜ್ಯ ಬ್ಯಾಂಕಿನ ಅಧಿಕಾರಿಯನ್ನು ಮುಖ್ಯಕಾರ್ಯ ನಿರ್ವಹಣಾಧಿಕಾರಿಯನ್ನಾಗಿ ಬ್ಯಾಂಕಿನ ಆಡಳಿತ ಮಂಡಳಿ ನೇಮಿಸಿಕೊಂಡಿದೆ.<br><br>ಕೋಲಾರ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿಗೆ ಸರ್ಕಾರ ಸಹಕಾರ ಸಂಘಗಳ ಉಪ ನಿಬಂಧಕರ ದರ್ಜೆಯ ಅಧಿಕಾರಿಯನ್ನು ನೇಮಿಸಿತ್ತು. ಸರ್ಕಾರದ ಈ ಕ್ರಮವನ್ನು ಪ್ರಶ್ನಿಸಿ ಗೌ॥ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ದಾಖಲಿಸಿ, ಬ್ಯಾಂಕಿನ ಆಡಳಿತ ಮಂಡಳಿಯಲ್ಲಿ ನಿರ್ಣಯಿಸಿ ಸರ್ಕಾರದ ಅಧಿಕಾರಿಯನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಯ ಹುದ್ದೆಯಿಂದ ಬಿಡುಗಡೆಗೊಳಿಸಿ ಬ್ಯಾಂಕಿನ ಸಿಬ್ಬಂದಿಯನ್ನೇ ಮುಖ್ಯಕಾರ್ಯ ನಿರ್ವಹಣಾಧಿಕಾರಿಯನ್ನಾಗಿ ನೇಮಿಸಿಕೊಂಡಿರುತ್ತಾರೆ. |

| | | |
|---|---|---|
| (ಇ) | ಸರ್ಕಾರದ ಷೇರು ಬಂಡವಾಳ ಹೊಂದಿರುವ ಅನೇಕ ಬ್ಯಾಂಕ್‌ಗಳಿಗೆ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳನ್ನು ನಿಯೋಜಿಸದಿರಲು ಕಾರಣವೇನು; ಕಾನೂನುಬಾಹಿರವಾಗಿ ಬ್ಯಾಂಕಿನ ನೌಕರರನ್ನು ನಿಯೋಜಿಸಿಕೊಂಡಿರುವ ಬ್ಯಾಂಕುಗಳಲ್ಲಿ ಸರ್ಕಾರದ ಷೇರು ಬಂಡವಾಳ ಇರುವುದಿಲ್ಲವೇ; (ವಿವರ ಒದಗಿಸುವುದು) | 2021 ನೇ ಸಾಲಿನವರೆಗೆ 08 ಡಿಸಿಸಿ ಬ್ಯಾಂಕುಗಳು ಸರ್ಕಾರದ ಷೇರು ಹಣವನ್ನು ಪಡೆದಿರುತ್ತವೆ. **ಅನುಬಂಧ-2** ರಲ್ಲಿ ನೀಡಲಾಗಿದೆ. 2021-22 ನೇ ಸಾಲಿನಲ್ಲಿ ರಾಜ್ಯದ ಎಲ್ಲಾ 21 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಗೂ ತಲಾ ರೂ.10.00 ಲಕ್ಷಗಳಂತೆ ಸರ್ಕಾರವು ಷೇರು ಬಂಡವಾಳವನ್ನು ಮಂಜೂರು ಮಾಡಿ ಬಿಡುಗಡೆ ಮಾಡಿರುತ್ತದೆ (**ಅನುಬಂಧ-3** ರಲ್ಲಿ ನೀಡಲಾಗಿದೆ). ಈ ಪೈಕಿ ಕೆನರಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಇವರು ತನ್ನ ಬೈಲಾದಲ್ಲಿ "ಎ" ತರಗತಿಯ ಸರ್ಕಾರಕ್ಕೆ ಸದಸ್ಯತ್ವ ಪಡೆಯಲು ಅವಕಾಶ ಮಾಡಿಲ್ಲವಾದುದರಿಂದ ಸಹಕಾರ ಸಂಘಗಳ ಕಾಯ್ದೆ 1959 ಕಲಂ 12(5) ರಲ್ಲಿ ಅವಕಾಶ ಮಾಡಿಕೊಡಲು ಬ್ಯಾಂಕಿಗೆ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ಬೆಳಗಾವಿ ಪ್ರಾಂತ ಇವರು ನಿರ್ದೇಶನ ನೀಡಿದ್ದು, ಈ ನಿರ್ದೇಶನಕ್ಕೆ ಧಾರವಾಡ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿರುತ್ತದೆ.<br><br>ರಾಜ್ಯದ ಈ ಕೆಳಕಂಡ 09 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳು ಆರ್.ಬಿ.ಐ/ನಬಾರ್ಡ್‌ನ Fit and proper criteria ಮಾನದಂಡಗಳಿಗೆ ಅನುಗುಣವಾಗಿ ಬ್ಯಾಂಕಿನ ಆಡಳಿತ ಮಂಡಳಿ ಸಭೆಯ ನಿರ್ಣಯದಂತೆ ಬ್ಯಾಂಕಿನ ನೌಕರರು/ಅಧಿಕಾರಿಗಳನ್ನೇ ನಿಯಮಾನುಸಾರ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳನ್ನಾಗಿ ನೇಮಕ ಮಾಡಿಕೊಳ್ಳಲಾಗಿರುತ್ತದೆ.<br>1. ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>2. ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>3. ಕೆನರಾ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>4. ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>5. ಶಿವಮೊಗ್ಗ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>6. ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>7. ಬೀದರ್ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>8. ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>9. ತುಮಕೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ, |
| ಈ) | ಅನೇಕ ಬ್ಯಾಂಕುಗಳು ಬ್ಯಾಂಕಿನ ನೌಕರರನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಹುದ್ದೆಗೆ ನಿಯೋಜಿಸಿ ಕೊಂಡಿರುವುದರಿಂದ ಸಾರ್ವಜನಿಕರ ಠೇವಣಿ ಹಣ ದುರುಪಯೋಗವಾಗುವುದಲ್ಲದೇ ಆಡಳಿತ ವೆಚ್ಚ ಹಾಗೂ ಇತರೆ ವೆಚ್ಚಗಳು | ಬ್ಯಾಂಕಿನ ನೌಕರರನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಹುದ್ದೆಗೆ ನಿಯೋಜಿಸಿ ಕೊಂಡು ಕಾರ್ಯನಿರ್ವಹಿಸುತ್ತಿರುವ ಬ್ಯಾಂಕುಗಳಲ್ಲಿ ಸಾರ್ವಜನಿಕರ ಠೇವಣಿ ಹಣ ದುರುಪಯೋಗವಾದ ಬಗ್ಗೆ ವರದಿಯಾಗಿರುವುದಿಲ್ಲ.<br><br>ವಿಜಯಪುರ ಡಿಸಿಸಿ ಬ್ಯಾಂಕಿನಲ್ಲಿ 11 ತಿಂಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ವಾಣಿಜ್ಯ ಬ್ಯಾಂಕಿನ ನಿವೃತ್ತ ಅಧಿಕಾರಿಯನ್ನು |

| | | |
|---|---|---|
| | ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸದರಿ ಹುದ್ದೆಗೆ ನಿಯೋಜಿಸಿಕೊಂಡ ದಿನದಿಂದ ಆಗಿರುವ ವೆಚ್ಚಗಳ ಮತ್ತು ಇತರೆ ದುರುಪಯೋಗಗಳ ವಿವರ ನೀಡುವುದು) | ದಿ:10.12.2020 ರಿಂದ ರೂ.80,000/- ವೇತನಕ್ಕೆ ನೇಮಿಸಿಕೊಂಡಿದ್ದು, ಇವರ ಗುತ್ತಿಗೆ ಅವಧಿಯನ್ನು 11 ತಿಂಗಳಿಗೊಮ್ಮೆ ನವೀಕರಿಸುತ್ತಿರುತ್ತಾರೆ.<br><br>ಉಳಿದ ಡಿಸಿಸಿ ಬ್ಯಾಂಕುಗಳಲ್ಲಿ 6 ನೇ ವೇತನ ಆಯೋಗದಂತೆ ಡಿಸಿಸಿ ಬ್ಯಾಂಕಿನ ಸಿಬ್ಬಂದಿಗಳಿಗೆ ನಿಗದಿಯಾದ ವೇತನವನ್ನೇ ಪಾವತಿಸಲಾಗುತ್ತಿದೆ. |
| (ಉ) | ಸಹಕಾರ ಇಲಾಖೆಯ ಅಧಿಕಾರಿಗಳನ್ನು ಸದರಿ ಬ್ಯಾಂಕುಗಳಿಗೆ ನಿಯೋಜಿಸಲು ಅವಕಾಶ ಇರುತ್ತದೆಯೇ, ಅಥವಾ ಇಲ್ಲವೇ; ಹಾಗಾದರೆ, ಸಹಕಾರ ಸಂಘಗಳ ಉಪ ನಿಬಂಧಕರ ದರ್ಜೆ ಮತ್ತು ಅದಕ್ಕೂ ಮೇಲ್ಪಟ್ಟ ಅಧಿಕಾರಿಗಳನ್ನು ಯಾವ ಯಾವ ಇಲಾಖೆಗೆ ನಿಯೋಜಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು) | ಹೌದು ಅವಕಾಶ ಇರುತ್ತದೆ. ಸಹಕಾರ ಸಂಘಗಳ ನಿಯಮ **ಅನುಬಂಧ-1** ರಲ್ಲಿ ನಮೂದಿಸಿರುವಂತೆ ಸಹಕಾರ ಸಂಘಗಳ ಉಪ ನಿಬಂಧಕರ ದರ್ಜೆಗೆ ಕಡಿಮೆ ಇಲ್ಲದ ಅಧಿಕಾರಿಯನ್ನು ಬ್ಯಾಂಕಿಗೆ ನಿಯೋಜಿಸಲು ಅವಕಾಶ ಇರುತ್ತದೆ.<br><br>ಕೆಳಕಂಡ ಬ್ಯಾಂಕುಗಳಿಗೆ ಸಹಕಾರ ಇಲಾಖೆ ಮತ್ತು ಲೆಕ್ಕಪರಿಶೋಧನಾ ಇಲಾಖೆಯ ಅಧಿಕಾರಿಗಳನ್ನು ಮುಖ್ಯಕಾರ್ಯನಿರ್ವಹಣಾಧಿಕಾರಿಯಾಗಿ ನೇಮಕ ಮಾಡಲಾಗಿರುತ್ತದೆ.<br>1. ರಾಯಚೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>2. ಕಲಬುರಗಿ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>3. ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>4. ದಾರವಾಡ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>5. ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>6. ಚಿತ್ರದುರ್ಗ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>7. ಹಾಸನ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>8. ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>9. ಮೈಸೂರು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>10. ಮಂಡ್ಯ, ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>11. ಕೊಡಗು ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕ್ ಲಿ,<br>• ಬಳ್ಳಾರಿ ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕಿಗೆ ಸಹಕಾರ ಇಲಾಖೆಯ ನಿವೃತ್ತ ಅಪರ ನಿಬಂಧಕರನ್ನು ಮುಖ್ಯಕಾರ್ಯನಿರ್ವಹಣಾಧಿಕಾರಿಯಾಗಿ ನೇಮಕ ಮಾಡಿಕೊಳ್ಳಲಾಗಿದೆ.<br><br>ಇಬ್ಬರು ಅಧಿಕಾರಿಗಳನ್ನು ಪೌರಾಯುಕ್ತರು, ತಿಪಟೂರು ನಗರಸಭೆ ನಗರಾಭಿವೃದ್ಧಿ ಇಲಾಖೆ ಹಾಗೂ ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆಗೆ ನಿಯೋಜಿಸಲಾಗಿದೆ. |

| | | |
|---|---|---|
| (ಊ) | ರಾಜ್ಯದ ಕೆಲವು ಡಿ.ಸಿ.ಸಿ.ಬ್ಯಾಂಕಿನಿಂದ (ದಾವಣಗೆರೆ ಒಳಗೊಂಡಂತೆ) ನಿಯೋಜಿಸಲ್ಪಟ್ಟ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ನೌಕರರ ನೇಮಕಾತಿಗೆ ಮುಂದಾಗಿದ್ದು ಈ ಬಗ್ಗೆ ಕಾನೂನು ಬಾಹಿರವಾಗಿ ನೇಮಕಾತಿ ಮಾಡಿಕೊಳ್ಳಲಾಗಿದೆಯೇ; ನೇಮಕಾತಿ ಮಾಡಿಕೊಳ್ಳುವ ಬ್ಯಾಂಕುವಾರು ಹುದ್ದೆಗಳ ವಿವರ ನೀಡುವುದು; | ರಾಜ್ಯದ 21 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಪೈಕಿ 12 ಜಿಲ್ಲಾ ಕೇಂದ್ರ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ಮುಖ್ಯಕಾರ್ಯ ನಿರ್ವಹಣಾಧಿಕಾರಿಯಾಗಿ ಬ್ಯಾಂಕಿನ ನೌಕರರು/ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿರುವ ಬ್ಯಾಂಕುಗಳಲ್ಲಿ ಯಾವುದೇ ಕಾನೂನುಬಾಹಿರ ನೇಮಕಾತಿ ಮಾಡಿಕೊಂಡಿರುವುದು ವರದಿಯಾಗಿರುವುದಿಲ್ಲ. ಆದರೆ ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಇವರು 48 ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಇಲಾಖೆಯ ಅನುಮತಿಯನ್ನು ಪಡೆದಿದ್ದು, ತಹಲ್‌ವರೆಗೆ ನೇಮಕಾತಿ ಪ್ರಕ್ರಿಯೆ ಪ್ರಾರಂಭಗೊಂಡಿರುವುದಿಲ್ಲ.<br><br>ವಿಜಯಪುರ ಡಿಸಿಸಿ ಬ್ಯಾಂಕಿನಲ್ಲಿ 73 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಆರಂಭವಾಗಿದ್ದು, ಅರ್ಜಿಗಳನ್ನು ಆಹ್ವಾನಿಸಿ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆ. |
| (ಋ) | ಬ್ಯಾಂಕಿನಿಂದ ನಿಯೋಜಿಸಲ್ಪಟ್ಟ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ನೌಕರರ ನೇಮಕಾತಿಗೆ ಮುಂದಾಗಿದ್ದು, ಈ ಬಗ್ಗೆ ಕಾನೂನು ಬಾಹಿರವಾಗಿ ನೇಮಕಾತಿ ಮಾಡಿಕೊಳ್ಳಲು ಕ್ರಮವಿಟ್ಟಿರುವುದು ಕಂಡುಬಂದಿದ್ದು, ಈ ರೀತಿ ನೇಮಕಾತಿ ಮಾಡಿಕೊಳ್ಳಲು ಅವಕಾಶವಿದೆಯೇ? (ಬ್ಯಾಂಕುವಾರು ಹುದ್ದೆಗಳ ವಿವರ ನೀಡುವುದು) | ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಗಳು 1960 ರ ನಿಯಮ 17 ಮತ್ತು 18 ರ ರೀತ್ಯಾ ಸಕ್ಷಮ ಪ್ರಾಧಿಕಾರದ ಅನುಮತಿ ಪಡೆದು ನಿಯಮ 17ಎ ರೀತ್ಯಾ ನೇಮಕಾತಿ ಸಮಿತಿಯನ್ನು ರಚಿಸಿಕೊಂಡು ಸದರಿ ನೇಮಕಾತಿ ಸಮಿತಿಗೆ ನಿಬಂಧಕರ ಪ್ರತಿನಿಧಿಯನ್ನು ನಿಯೋಜಿಸಿಕೊಂಡು ನಂತರ ನಿಯಮಾನುಸಾರ ಪ್ರಕ್ರಿಯೆಯನ್ನು ಕೈಗೊಂಡು ಸಿಬ್ಬಂದಿ ನೇಮಕಾತಿಗೆ ಕ್ರಮವಿಡಬೇಕಾಗಿರುತ್ತದೆ ವಿನ: ಕಾನೂನುಬಾಹಿರವಾಗಿ ನೇಮಕ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. |

ಸಂಖ್ಯೆ ಸಿಒ 58 ಸಿಸಿಬಿ 2022

(ಎಸ್. ಟಿ. ಸೋಮಶೇಖರ್)

ಸಹಕಾರ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ವಿ. [illegible] ಇವರ ಚುಕ್ಕೆ ಗುರುತಿಲ್ಲದ ಪ್ರ. ಸಂ. 2066 (2387)ಕ್ಕೆ

## ಅನುಬಂಧ - 1

RPCD/CO/RCB/[illegible]/03.01.03/2011-12 ದಿನಾಂಕ 05-0[illegible]

| | |
|---|---|
| **Chief Executive Officer (CEO)** | 1. The person may preferably not be above 55 years of age at the time of appointment.<br>2. The person to be appointed as CEO shall at least be a:<br>i. Graduate with CAIIB/ DBF/ Diploma in Cooperative Business Management or equivalent qualification; or<br>ii. Chartered/ Cost Accountant; or<br>iii. Post graduate in any discipline<br>3. The person shall have at least eight years' work experience at the middle/ senior level in the banking sector. Senior / middle level for the purpose shall be taken as the third level (scale/ cadre) onwards (i.e., excluding the first two levels (scales/ cadres) in the officer cadre), or as the highest two levels (scales/cadres) below the level of CEO.<br>4. The Board of the bank, in question, / Selection Committee should also undertake a process of due diligence in respect of the person, relying on information to be obtained from him/her as in Annex II, before appointment |

ಸಹಕಾರ ಸಂಘಗಳ ಅಪರ ನಿಬಂಧಕರು
(ಪತ್ತು)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)**
**ರವರ ಚುಕ್ಕೆ ಗುರುತಿಲ್ಲದ**
**ಪ್ರಶ್ನೆ ಸಂಖ್ಯೆ 2066(2387) ಕ್ಕೆ ಅನುಬಂಧ-2**

| ಕ್ರ.ಸಂ | ಬ್ಯಾಂಕಿನ ಹೆಸರು | ಸರ್ಕಾರದ ಷೇರು ಮೊತ್ತ (ರೂ. ಕೋಟಿಗಳಲ್ಲಿ) |
|---|---|---|
| 1 | ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 1.26 |
| 2 | ರಾಯಚೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 2.00 |
| 3 | ಬೆಳಗಾವಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 0.10 |
| 4 | ಕಲಬುರಗಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 0.09 |
| 5 | ಧಾರವಾಡ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 4.13 |
| 6 | ದಾವಣಗೆರೆ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 4.23 |
| 7 | ಕೋಲಾರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 7.36 |
| 8 | ಶಿವಮೊಗ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಲಿ | 0.10 |

ಸಹಕಾರ ಸಂಘಗಳ ಅಪರ ನಿಬಂಧಕರು.
(ಪತ್ತು)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ
ಕೆ.ಎ. ತಿಪ್ಪೇಸ್ವಾಮಿ (ಸ್ಥಳೀಯ ಸಂಸ್ಥೆಗಳ ಚುನಾಯಿತ-
-ರಾದವರು) ರವರ ಪ್ರಶ್ನೆ ಸಂಖ್ಯೆ 2066 (೨೩೮೭)ಗೆ
ಅನುಬಂಧ - 03

ಕರ್ನಾಟಕ ಸರ್ಕಾರ

(ಸಹಕಾರ ಇಲಾಖೆ)

ಸಹಕಾರ ಸಂಘಗಳ ನಿಬಂಧಕರ ಕಛೇರಿ, ಕರ್ನಾಟಕ ರಾಜ್ಯ, ನಂ.1, ಅಲಿಆಸ್ಕರ್ ರಸ್ತೆ, ಬೆಂಗಳೂರು-52.

ವಿಷಯ: ರಾಜ್ಯದ 21 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ತಲಾ ರೂ.10.00 ಲಕ್ಷಗಳ ಗರಿಷ್ಠ ಮಿತಿಗೊಳಪಟ್ಟು ಶೇ.25 ರಷ್ಟು ಮಂಜೂರಾಗಿರುವ ಷೇರು ಬಂಡವಾಳದ ಮೊತ್ತವನ್ನು ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ಸಿಓ/89/ಸಿಸಿಬಿ/2021 ದಿನಾಂಕ:21-06-2021
2. ಸರ್ಕಾರದ ಆದೇಶ ಸಂಖ್ಯೆ:ಸಿಒ 116 ಸಿಸಿಬಿ 2021 ದಿನಾಂಕ: 06-08-2021
3. ಸರ್ಕಾರದ ಆದೇಶ ಸಿಓ/116/ಸಿಸಿಬಿ/2021 ದಿನಾಂಕ:31-08-2021

---

**ಪೀಠಿಕೆ**

2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 79 ರಲ್ಲಿ "ಡಿಸಿಸಿ ಬ್ಯಾಂಕಿನಲ್ಲಿ ಸರ್ಕಾರದ ಸಹಭಾಗಿತ್ವವನ್ನು ಪ್ರೋತ್ಸಾಹಿಸಲು ಹಾಗೂ ಷೇರು ಬಂಡವಾಳ ಹೆಚ್ಚಿಸುವ ಉದ್ದೇಶದಿಂದ 21 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ರೂ.10.00 ಲಕ್ಷಗಳ ಗರಿಷ್ಠ ಮಿತಿಗೊಳಪಟ್ಟು ಶೇ. 25 ರಷ್ಟು ಷೇರು ಬಂಡವಾಳ ನೀಡಲಾಗುವುದು" ಎಂದು ಘೋಷಿಸಲಾಗಿದ್ದು, ಈ ಯೋಜನೆ ಅನುಷ್ಠಾನಗೊಳಿಸಲು ಉಲ್ಲೇಖ (1) ರನ್ವಯ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶವನ್ನು ಹೊರಡಿಸಿರುತ್ತದೆ.

ಉಲ್ಲೇಖ (2) & (3) ರ ಸರ್ಕಾರದ ಆದೇಶದಲ್ಲಿ ಲೆಕ್ಕ ಶೀರ್ಷಿಕೆ "4425-00-107-0-17-211 ಬಂಡವಾಳ ಹೂಡಿಕೆ" ರಡಿ ರೂ.210.00 ಲಕ್ಷಗಳಷ್ಟು ಹಣ ಬಿಡುಗಡೆ ಮಾಡಲಾಗಿರುತ್ತದೆ. ಬಿಡುಗಡೆಯಾದ ಮೊತ್ತವನ್ನು ಸಂಬಂಧಿಸಿದ ಡಿಸಿಸಿ ಬ್ಯಾಂಕುಗಳಿಗೆ ಬಿಡುಗಡೆ ಮಾಡಿ ಆಯಾ ಬ್ಯಾಂಕಿನ ಚಾಲ್ತಿ ಖಾತೆಗೆ ಜಮೆ ಮಾಡುವಂತೆ, ಮುಖ್ಯಕಾರ್ಯನಿರ್ವಹಣಾಧಿಕಾರಿ ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿ. ಬೆಂಗಳೂರು ಇವರಿಗೆ ತಿಳಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸಂಖ್ಯೆ:ಆರ್‌ಸಿಎಸ್:ಸಿಆರ್‌ಡಿ:ಕೆಎಂಸಿ-4:01:2021-22 ದಿನಾಂಕ:7-10-2021

-:ಆದೇಶ:-

ಪೀಠಿಕೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಆದೇಶಕ್ಕೆ ಅಡಕಗೊಳಿಸಿರುವ ಅನುಬಂಧದಲ್ಲಿ ನಮೂದಿಸಿರುವ ರಾಜ್ಯದ 21 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ತಲಾ ರೂ. 10.00 ಲಕ್ಷಗಳನ್ನು (ರೂ. ಹತ್ತು ಲಕ್ಷ ಮಾತ್ರ) ಆಯಾ ಬ್ಯಾಂಕಿನ ಚಾಲ್ತಿ ಖಾತೆಗೆ ಬಿಡುಗಡೆ ಮಾಡಲು ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ. ಬೆಂಗಳೂರು ಇವರಿಗೆ ಆದೇಶಿಸಿದೆ.

**<u>ಸರ್ಕಾರದ ಆದೇಶದ ಪ್ರಕಾರ ಡಿಸಿಸಿ ಬ್ಯಾಂಕುಗಳು ಪಾಲಿಸಬೇಕಾದ ಷರತ್ತು ಮತ್ತು ನಿಬಂಧನೆಗಳು:</u>**

1. ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ವ್ಯಾಪಾರ ಅಭಿವೃದ್ಧಿಗೊಳಿಸಲು ಕಾಲಬದ್ಧ ಅಭಿವೃದ್ಧಿ ಕ್ರಿಯಾ ಯೋಜನೆ (DAP) ಯನ್ನು ರೂಪಿಸಿಕೊಂಡು ಷೇರು ಬಂಡವಾಳ ವೃದ್ಧಿಸಿಕೊಂಡು ನಿರಂತರವಾಗಿ CRAR ಪ್ರಮಾಣವನ್ನು ಹೆಚ್ಚಿಸಿಕೊಳ್ಳಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.
2. ಬ್ಯಾಂಕ್ ಪ್ರತಿವರ್ಷ ಷೇರು ಬಂಡವಾಳ ತೀರುವಳಿ ನಿಧಿ (ಷೇರು ಕ್ಯಾಪಿಟಲ್ ರಿಡಂಪ್ಷನ್ ಫಂಡ್) ನ್ನು ಸೃಷ್ಟಿಸಿ ಆಸ್ತಿ-ಜವಾಬ್ದಾರಿ ತಃಖ್ತೆಯಲ್ಲಿ ತೋರಿಸತಕ್ಕದ್ದು.
3. ಸರ್ಕಾರವು ಮಂಜೂರು ಮಾಡಿರುವ ಷೇರು ಬಂಡವಾಳವನ್ನು ಯಾವ ಉದ್ದೇಶಕ್ಕಾಗಿ ಮಂಜೂರು ಮಾಡಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದು.
4. ಇದನ್ನು ಯಾವುದೇ ಖಾತೆಗಳಿಗೆ ಉದ್ದೇಶಗಳಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದಲ್ಲ.
5. ಬ್ಯಾಂಕು ರೂಪಿಸುವ ಅಭಿವೃದ್ಧಿ ಕ್ರಿಯಾ ಯೋಜನೆಯನ್ನು ನಬಾರ್ಡ್ ಸಂಸ್ಥೆಗೆ ಮತ್ತು ರಾಜ್ಯ ಸರ್ಕಾರಕ್ಕೆ ನಿಗದಿತವಾಗಿ ತಿಳಿಸತಕ್ಕದ್ದು.
6. ಬ್ಯಾಂಕು ಯಾವುದೇ ಹಣ ದುರುಪಯೋಗ ಹಾಗೂ ಅವ್ಯವಹಾರಗಳಿಗೆ ಅವಕಾಶವಿಲ್ಲದಂತೆ ವ್ಯವಸ್ಥೆಯನ್ನು ರೂಪಿಸಿಕೊಂಡು ಬಿಡುಗಡೆ ಮಾಡಿರುವ ಷೇರು ಮೊಬಲಗನ್ನು ಸದುಪಯೋಗ ಪಡಿಸಿಕೊಳ್ಳಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.
7. ಬ್ಯಾಂಕು ತನ್ನ ನಿಯಮಗಳ ವ್ಯಾಪ್ತಿಯಲ್ಲಿ ಸಾಲ ವಿತರಣೆಯನ್ನು ವಿಸ್ತರಿಸಿಕೊಂಡು ತನ್ಮೂಲಕ ಬ್ಯಾಂಕಿನ ಷೇರು ಮೊಬಲಗು ಹೆಚ್ಚಿಸಿಕೊಳ್ಳಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು ಮತ್ತು ಈ ನಿಟ್ಟಿನಲ್ಲಿ ಸಾಲ ವಿತರಣೆ ಯೋಜನೆ ರೂಪಿಸಿಕೊಳ್ಳತಕ್ಕದ್ದು.
8. ಸರ್ಕಾರವು ತೊಡಗಿಸಿರುವ ಷೇರು ಮೊಬಲಗಿಗೆ ಕಡ್ಡಾಯವಾಗಿ ನಿಯಮಾನುಸಾರ ಲಾಭಾಂಶವನ್ನು ಪಾವತಿಸತಕ್ಕದ್ದು.
9. ಸರ್ಕಾರವು ತೊಡಗಿಸಿರುವ ಷೇರು ಮೊಬಲಗಿಗೆ ಬ್ಯಾಂಕ್ ನಿಯಮಾನುಸಾರ ಷೇರು ಪ್ರಮಾಣಪತ್ರಗಳನ್ನು ಸಲ್ಲಿಸತಕ್ಕದ್ದು.
10. ಸರ್ಕಾರದ ಷೇರು ಹಣ ಬಿಡುಗಡೆಯಾದ ಬಗ್ಗೆ ಕಾರ್ಯವ್ಯಾಪ್ತಿ ನಿಬಂಧಕರು. ಕಛೇರಿಯಲ್ಲಿ ಇದೇ ಉದ್ದೇಶಕ್ಕೆ ಮೀಸಲಿರಿಸಿರುವ ಷೇರು ವಹಿಯಲ್ಲಿ (Government Share Register) ನಲ್ಲಿ ನಮೂದಿಸುವುದು.

(ಎಸ್. ಜಿಯಾಉಲ್ಲಾ)
ಸಹಕಾರ ಸಂಘಗಳ ನಿಬಂಧಕರು,
ಕರ್ನಾಟಕ ರಾಜ್ಯ, ಬೆಂಗಳೂರು.

ಗೆ,
ಮುಖ್ಯ ಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಚಾಮರಾಜಪೇಟೆ
ಬೆಂಗಳೂರು.

<u>ಪ್ರತಿಯನ್ನು</u>

1. ಸರ್ಕಾರದ ಕಾರ್ಯದರ್ಶಿಯವರು. ಸಹಕಾರ ಇಲಾಖೆ. ಬಹುಮಹಡಿಗಳ ಕಟ್ಟಡ. ಬೆಂಗಳೂರುರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.

2. ಎಲ್ಲಾ ಪ್ರಾಂತ ಸಹಕಾರ ಸಂಘಗಳ ಜಂಟಿ ನಿಬಂಧಕರು ಇವರಿಗೆ ಕಳುಹಿಸಿ ಬ್ಯಾಂಕಿನಿಂದ ಮೂಲ ಷೇರು ಪ್ರಮಾಣ ಪತ್ರವನ್ನು ಸಂಗ್ರಹಿಸಿಕೊಂಡು ಅದರ ಜೆರಾಕ್ಸ್ ಪ್ರತಿಯನ್ನು ಕಾರ್ಯವ್ಯಾಪ್ತಿ ಉಪವಿಭಾಗೀಯ ಸಹಾಯಕ ನಿಬಂಧಕರ ಕಛೇರಿಯಲ್ಲಿ ನಿರ್ವಹಿಸಿ, ಮೂಲ ಪ್ರಮಾಣ ಪತ್ರವನ್ನು ಈ ಕಛೇರಿಯ ಮುಂದಿನ ಕ್ರಮಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳಲು ತಿಳಿಸಿದೆ.
3. ಎಲ್ಲಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ
4. ಎಲ್ಲಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ
5. ಎಲ್ಲಾ ಉಪವಿಭಾಗೀಯ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ

ಸಹಕಾರ ಸಂಘಗಳ ಅಪರ ನಿಬಂಧಕರು
(ಪತ್ತು)